ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

31 (32) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರ ನೀಡುತ್ತಿರುವ ಗೌರವ ಧನ ಎಷ್ಟು; ಗೌರವ ಧನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಯಾವುವು;

(ಈ) ಪ್ರತಿ ತಿಂಗಳು ಸಮಯಕ್ಕೆ ಸರಿಯಾಗಿ ಗೌರವ ಧನ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು; ಸಮಯಕ್ಕೆ ಸರಿಯಾಗಿ ಗೌರವ ಧನ ಪಾವತಿಸಲು ಕೈಗೊಂಡಿರುವ ಕ್ರಮಗಳೇನು?